ರಾಜ್ಯದಲ್ಲಿ ನೂತನ ಕಾನೂನು ಪದವಿ ಕಾಲೇಜ್ ಮತ್ತು ಪಿ.ಜಿ. ಸೆಂಟರ್ ಸ್ಥಾಪನೆ ಕುರಿತು

2932(3240) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಕಾನೂನು ಪದವಿ ಕಾಲೇಜ್ ಮತ್ತು ಪಿ.ಜಿ. ಸೆಂಟರ್ ಪ್ರಾರಂಭಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕೊಪ್ಪಳ ಜಿಲ್ಲೆಯಲ್ಲಿ ಈ ಕಾಲೇಜುಗಳನ್ನು ಪ್ರಾರಂಭಿಸಲಾಗುವುದೇ;

ಇ) ಕಳೆದ ವರ್ಷ ಪ್ರಾರಂಭವಾದ ಪದವಿ ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು?

ಡಾ: ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ.

ಆ) ಇಲ್ಲ

ಇ) ಹೌದು. ಕಟ್ಟಡಕ್ಕೆ ನಿವೇಶನವನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ. ನಿವೇಶನ ದೊರೆತ ನಂತರ ಕಟ್ಟಡದ ಬಗ್ಗೆ ಪರಿಶೀಲಿಸಲಾಗುವುದು.

ಕೊಪ್ಪಳ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಶಿಕ್ಷಕರ ನೇಮಕಾತಿ ಕುರಿತು

2933(3241) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಶಿಕ್ಷಕರನ್ನು ತುಂಬುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಶೈಕ್ಷಣಿಕ ವರ್ಷದಲ್ಲಿ ಹೊಸ ಪ್ರೌಢ ಶಾಲೆಗಳನ್ನು ತೆರೆಯುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕಳೆದ 2002–03ನೇ ಸಾಲಿನಲ್ಲಿ ನೇಮಕಾತಿ ಹೊಂದಿದ ಪ್ರಾಥಮಿಕ ಶಾಲಾ ಶಿಕ್ಷಕರು ಕೊಪ್ಪಳ ಜಿಲ್ಲೆಯಿಂದ ಈಗಾಗಲೇ ವರ್ಗಾವಣೆ ಹೊಂದಿರುವುದರಿಂದ ಪುನಃ ಶಿಕ್ಷಕರ ಕೊರತೆ ಪ್ರಾರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) 2003–04ನೇ ಸಾಲಿನಲ್ಲಿ ರಾಜ್ಯದ ವಿವಿಧ ಸ್ಥಳಗಳಲ್ಲಿ 73 ಹೊಸ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿದೆ.

ಇ) ಬಂದಿದೆ. ವರ್ಗಾವಣೆಗೊಂಡು ಖಾಲಿಯಾದ ಹುದ್ದೆಗಳನ್ನು ನೇಮಕಾತಿ ಮೂಲಕ ಭರ್ತಿ ಮಾಡಲಾಗುವುದು. ಕೊಪ್ಪಳ ಜಿಲ್ಲೆಯಲ್ಲಿ ಖಾಲಿ ಇರುವ 152 ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಇನ್ನೆರಡು ತಿಂಗಳಲ್ಲಿ ಪೂರ್ಣಗೊಳಿಸಲಾಗುವುದು.

ಕೊಪ್ಪಳ ಜಿಲ್ಲಾ ಆಸ್ಪತ್ರೆಯ ಕಾಮಗಾರಿಗಳನ್ನು ಕುರಿತು

2934(3242) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?